ದಿನಾಂಕಃ **23.09.2025** ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಪಾಟೀ ಸವಾಲುಃ **5** ನೇ ಪ್ರತಿವಾದಿ ಪರ ಶ್ರೀ ಕೆ.ವಿ.ಎಸ್.ಕೆ. ವಕೀಲರಿಂದಃ

ನನ್ನ ತಂದೆಗೆ ಒಟ್ಟು 8 ಜನ ಮಕ್ಕಳು. 8 ಜನರಲ್ಲಿ ನಾನು ಹಿರಿಯನಾಗಿರುತ್ತೇನೆ. ನನ್ನ ತಂದೆಗೆ ಯಾವುದೇ ಪಿತ್ರಾರ್ಜಿತ ಆಸ್ತಿಗಳು ಇರಲಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರೆದು ದಾವಾ ಸ್ವತ್ತುಗಳನ್ನು ನನ್ನ ತಾತ ನನ್ನ ತಂದೆಗೆ ದಾನವಾಗಿ ಕೊಟ್ಟಿರುತ್ತಾರೆ ಎಂದು ಉತ್ತರಿಸಿರುತ್ತಾರೆ. ಆದರೆ ಯಾವ ದಿನಾಂಕದಂದು ದಾನ ಕೊಟ್ಟಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ. ದಾವಾ ಸ್ವತ್ತುಗಳನ್ನು ನನ್ನ ತಾತ ನನ್ನ ತಂದೆಗೆ ದಾನವಾಗಿ ಕೊಟ್ಟಿರುತ್ತಾರೆಂದು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

**2.** ದಾವಾ ಸ್ವತ್ತು ನನ್ನ ತಂದೆಗೆ 1960 ರಲ್ಲಿ ಮಂಜೂರಾದಂತಹ ಜಮೀನು ಎಂದರೆ ಸರಿ. ಆ ಸಮಯಕ್ಕೆ ನನಗೆ ಒಂದರಿಂದ ಎರಡು ವರ್ಷ ವಯಸ್ಸಾಗಿತ್ತು ಎಂದರೆ ಸರಿ. ದಾವಾ ಸ್ವತ್ತು ನನ್ನ ತಂದೆಯ ಸ್ವಯಾರ್ಜಿತ ಸ್ವತ್ತು ಎಂದರೆ ಸರಿ. ದಾವಾ 2 ನೇ ಸ್ವತ್ತನ್ನು ದಿಃ12.03.1973 ರಂದು ನನ್ನ ತಂದೆ ಎಸ್.ಎನ್. ಪ್ರಸನ್ನಕುಮಾರ್‌ರವರಿಂದ ರೂ. 500/- ಗಳಿಗೆ ಖರೀದಿ ಮಾಡಿರುತ್ತಾರೆ ಎಂದರೆ ಸರಿ. ದಾವಾ 2 ನೇ ಆಸ್ತಿ ನನ್ನ ತಂದೆಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿ.

**3.** 5 ನೇ ಪ್ರತಿವಾದಿ ಕರ್ನಾಟಕ ಗಾಮೀಣ ಬ್ಯಾಂಕ್‌ನಲ್ಲಿ ವ್ಯವಸ್ಥಾಪಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು ಎಂದರೆ ಸರಿ. 5 ನೇ ಪ್ರತಿವಾದಿಯೇ ಬ್ಯಾಂಕಿನಲ್ಲಿ ಸಾಲ ಪಡೆದುಕೊಂಡು ದಾವಾ ಸ್ವತ್ತುಗಳನ್ನು ಅಭಿವೃದ್ಧಿ ಪಡಿಸಿ ಸಾಗುವಳಿ ಮಾಡುತ್ತಿದ್ದರು ಎಂದು ಸೂಚಿಸುವುದು ಸರಿಯಲ್ಲ. ನಾನು ಮತ್ತು ಪ್ರತಿವಾದಿಗಳು ಒಟ್ಟು ಕುಟುಂಬದಲ್ಲಿರಲಿಲ್ಲ ಎಂದು ಸೂಚಿಸುವುದು ಸರಿಯಲ್ಲ. ನಾನು ಮತ್ತು ನನ್ನ ಅಣ್ಣ-ತಮ್ಮಂದಿರು ಬೇರೆ-ಬೇರೆಯಾಗಿ ವಾಸವಾಗಿದ್ದ ಕಾರಣ ನನ್ನ ತಂದೆಯ ಯೋಗ-ಕ್ಷೇಮ 5 ನೇ ಪ್ರತಿವಾದಿ

ನೋಡಿಕೊಳ್ಳುತ್ತಿದ್ದರು ಎಂದರೆ ಸರಿ. 5 ನೇ ಪ್ರತಿವಾದಿ ನನ್ನ ತಂದೆಯನ್ನು ಪ್ರೀತಿ ವಿಶ್ವಾಸದಿಂದ ನೋಡಿಕೊಳ್ಳುತ್ತಿದ್ದ ಕಾರಣ ದಿಃ05.12.2018 ರಂದು ದಾವಾ ಸ್ವತ್ತುಗಳಿಗೆ ಸಂಬಂಧಿಸಿದಂತೆ ನನ್ನ ತಂದೆ 5 ನೇ ಪ್ರತಿವಾದಿಗೆ ಮರಣ ಶಾಸನ ಬರೆದುಕೊಟ್ಟಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ.

**4.** ಮರಣಶಾಸನದ ಆಧಾರದ ಮೇರೆಗೆ ದಾವಾ ಸ್ವತ್ತುಗಳ ಖಾತೆ 5 ನೇ ಪ್ರತಿವಾದಿಯ ಹೆಸರಿಗೆ ವರ್ಗಾವಣೆಯಾಗಿರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ. ದಾವಾ ಸ್ವತ್ತುಗಳ ಖಾತೆ ವರ್ಗಾವಣೆ ವಿಚಾರವಾಗಿ ನಾನು ಮಧುಗಿರಿಯ ತಹಶೀಲ್ದಾರ್‌ರವರ ಕಛೇರಿಯಲ್ಲಿ ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿ. ಸದರಿ ಪ್ರಕರಣದಲ್ಲಿ ಮರಣಶಾಸನದಂತೆ ಖಾತೆ ವರ್ಗಾವಣೆ ಮಾಡಲು ಆದೇಶವಾಗಿರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ. ದಾವಾ ಸ್ವತ್ತುಗಳನ್ನು 5 ನೇ ಪ್ರತಿವಾದಿಯೇ ಸಾಗುವಳಿ ಮಾಡುತ್ತಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ. ದಾವಾ ಸ್ವತ್ತುಗಳಿಗೆ ಸಂಬಂಧಿಸಿದಂತೆ 5 ನೇ ಪ್ರತಿವಾದಿಗೆ ಮರಣಶಾಸನ ಬರೆದುಕೊಟ್ಟಿರುವುದರಿಂದ ನನಗೆ ಪಾಲು ಇರುವುದಿಲ್ಲ ಎಂದು ಸೂಚಿಸುವುದು ಸರಿಯಲ್ಲ.

**5.** ದಾವಾ ಸ್ವತ್ತುಗಳನ್ನು ಅಕ್ರಮವಾಗಿ ಪಡೆದುಕೊಳ್ಳುವ ಉದ್ದೇಶದಿಂದ ಸುಳ್ಳು ದಾವೆಯನ್ನು ಹೂಡಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

ಮರುವಿಚಾರಣೆ ಇಲ್ಲ.
(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-

(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ